ಅ) *ಈ ಮುಸುಕಿನ ಜೋಳಕ್ಕೆ ಬೆಂಬಲ ಬೆಲೆ ನೀಡಲು ಸರ್ಕಾರ ನಿರ್ಧರಿಸಿದೆಯೇ?*

ಇ) *ಹಾಗಿದ್ದಲ್ಲಿ ಖರೀದಿ ಕೇಂದ್ರಗಳನ್ನು ಎಲ್ಲೆಲ್ಲಿ ಸ್ಥಾಪಿಸಲಾಗಿದೆ?*

ಈ) *ರಾಜ್ಯದ ರೈತರಿಗೆ ಅನುಕೂಲವಾಗಲು ಹೊಸದಾಗಿ ಎಲ್ಲೆಲ್ಲಿ ಮುಸುಕಿನ ಜೋಳದ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗುವುದು?*

ಶ್ರೀ ಟಿ.ಬಿ. ಜಯಚಂದ್ರ (ಕೃಷಿ ಸಚಿವರು) :

ಅ) ಮುಂಗಾರು 2000 ವರ್ಷದಲ್ಲಿ ಸುಮಾರು 19.22 ಲಕ್ಷ ಟನ್‌ಗಳ ಮುಸುಕಿನ ಜೋಳದ ಉತ್ಪಾದನೆಯನ್ನು ನಿರೀಕ್ಷಿಸಲಾಗಿದೆ.

ಆ) ಹೌದು.

ಇ) ಈಗ ರಾಜ್ಯದಲ್ಲಿ 16 ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

1. ಕೊಪ್ಪಳ
2. ಸವದತ್ತಿ
3. ಗೋಕಾಕ
4. ದಾವಣಗೆರೆ
5. ರಾಣೆಬೆನ್ನೂರು
6. ಬಳ್ಳಾರಿ
7. ಪಿರಿಯಾಪಟ್ಟಣ
9. ಶಿವಮೊಗ್ಗ
10. ಗೌರಿಬಿದನೂರು
11. ಹಾವೇರಿ
12. ಅಣ್ಣಿಗೇರಿ
13. ಬ್ಯಾಡಗಿ
14. ರಾಮದುರ್ಗ
15. ಹಿರೇಕೆರೂರು
16. ಬಾಗಲಕೋಟೆ.

ಈ) ಜಿಲ್ಲಾ ಮಟ್ಟದ ಟಾಸ್ಕ್‌ಫೋರ್ಸ್ ಸಮಿತಿಗಳ ಶಿಫಾರಸ್ಸಿನ ಮೇಲೆ ಅವಶ್ಯವಾದಲ್ಲಿ ರೈತರಿಗೆ ಅನುಕೂಲವಾಗುವ ಎಪಿಎಂಸಿ ಮಾರುಕಟ್ಟೆ ಪ್ರಾಂಗಣಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

ಅಂಬೇಡ್ಕರ್ ಹಾಗೂ ಆಶ್ರಯ ಯೋಜನೆಯಡಿಯಲ್ಲಿ ನಿರ್ಮಿಸಿರುವ ಮನೆಗಳು

3011 - ಶ್ರೀ ಕಟ್ಟಾ ಸುಬ್ರಮಣ್ಯನಾಯ್ಡು (ಶಿವಾಜಿನಗರ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *2000-2001ನೇ ಸಾಲಿನಲ್ಲಿ ರಾಜ್ಯದಲ್ಲಿ ನಿರ್ಮಿಸಲಾಗುವ ಅಂಬೇಡ್ಕರ್ ಮತ್ತು ಆಶ್ರಯ ಯೋಜನೆಯಡಿಯಲ್ಲಿನ ಮನೆಗಳ ಸಂಖ್ಯೆ ಎಷ್ಟು?*

ಆ) *ಈ ಮನೆಗಳನ್ನು ಕಾಂಕ್ರೀಟ್ ಛಾವಣಿ ಹಾಗೂ ತಮಿಳುನಾಡು ಮಾದರಿಯಂತೆ ಫ್ಲಾಟ್ ಮಾದರಿಯಲ್ಲಿ ನಿರ್ಮಿಸಲು ಸರ್ಕಾರ ಉದ್ದೇಶಿಸಿದೆಯೇ?*

ಇ) 2000-2001ರಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಈ ಯೋಜನೆಯಡಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಖಮರುಲ್ ಇಸ್ಲಾಂ (ವಸತಿ ಸಚಿವರು) :

ಅ) ಪ್ರಸಕ್ತ ಸಾಲಿನಲ್ಲಿ ಆಶ್ರಯ ಯೋಜನೆಯಡಿ 1,55,000 (1,30,000 ಗ್ರಾಮೀಣ, 25,000 ಪಟ್ಟಣ ಪ್ರದೇಶ) ಹಾಗೂ ಅಂಬೇಡ್ಕರ್ ಯೋಜನೆಯಡಿ 19,442 ಮನೆಗಳ ನಿರ್ಮಾಣದ ಗುರಿ ಹೊಂದಲಾಗಿದೆ.

ಆ) ಇಲ್ಲ.

ಇ) 2000-2001ನೇ ಸಾಲಿನಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಶ್ರಯ ಯೋಜನೆಯಡಿ ಗ್ರಾಮೀಣ ಪ್ರದೇಶದಲ್ಲಿ 1,30,000 ಮನೆಗಳನ್ನು, ಪಟ್ಟಣ ಪ್ರದೇಶದಲ್ಲಿ 25,000 ಮನೆಗಳನ್ನು ಮತ್ತು ಅಂಬೇಡ್ಕರ್ ಯೋಜನೆಯಡಿ 19,442 ಮನೆಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ.

ಬೆಂಗಳೂರು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನಲ್ಲಿ ನಡೆದಿರುವ ಅಕ್ರಮಗಳು

3012 - ಶ್ರೀ ಕಟ್ಟಾ ಸುಬ್ರಹ್ಮಣ್ಯನಾಯ್ಡು (ಶಿವಾಜಿನಗರ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ಜಿಲ್ಲಾ ಕೇಂದ್ರ ಬ್ಯಾಂಕಿನಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಈ ಅವ್ಯವಹಾರಗಳನ್ನು ತನಿಖೆ ಮಾಡಲಾಗಿದೆಯೇ? (ಅವ್ಯವಹಾರದ ಪೂರ್ಣ ವಿವರ ಒದಗಿಸುವುದು)*

ಇ) *ವರದಿಯಲ್ಲಿನ ಪ್ರಸ್ತಾಪಿತ ಮುಖ್ಯ ಅಂಶಗಳಾವುವು? ಯಾರನ್ನು ಈ ಅವ್ಯವಹಾರಕ್ಕೆ ಹೊಣೆಗಾರರನ್ನಾಗಿ ಮಾಡಲಾಗಿದೆ?*

ಶ್ರೀ ಡಿ.ಕೆ. ಶಿವಕುಮಾರ್ (ಸಹಕಾರ ಸಚಿವರು) :

ಅ) ಬೆಂಗಳೂರು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ಸಹಕಾರ ಕಾಯ್ದೆ ಅಡಿಯಲ್ಲಿ ವಿಚಾರಣೆ ಮತ್ತು ತನಿಖೆ ಮಾಡಲಾಗಿದೆ. ಹಾಗೂ ಈ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ಸಿ.ಬಿ.ಐ. ತನಿಖೆಗೂ ಸಹ ವಹಿಸಲಾಗಿದೆ.

ಕೃಷಿಯೇತರ ಸಾಲ ಮಂಜೂರಾತಿಯಲ್ಲಿ ನಿಯಮಗಳನ್ನು ಪಾಲಿಸದೆ ಬ್ಯಾಂಕಿನಲ್ಲಿ ಅವ್ಯವಹಾರ ನಡೆದಿದೆ.

ಆ) ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ ನಬಾರ್ಡ್‌ನ ಮಾರ್ಗ ಸೂಚಿಗಳನ್ನು ಉಲ್ಲಂಘಿಸಿ ಕೋಟ್ಯಾಂತರ ರೂಪಾಯಿ ಸಾಲ ಮಂಜೂರು ಮಾಡಲಾಗಿದೆ. ಕೃಷಿಯೇತರ ಸಾಲ